# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ಹಿರಿಯೂರು

**ಸಿ.ಸಿ ನಂಃ 4/2019**

ಪಿರ್ಯಾದಿಃ ಹಿರಿಯೂರು ಗ್ರಾಮಾಂತರ ಪೋಲಿಸ್ ಠಾಣೆ

ವಿರುದ್ಧ

ಆರೋಪಿತರುಃ ಶೇಖರಪ್ಪ ಯಾನೆ
ಸೋಮಶೇಖರ
ತಂದೆ ಮೀಸೆಶೇಖರಪ್ಪ, 23 ವರ್ಷ
ವಾಸಃ ನಾಯಕರಕೊಟ್ಟಿಗೆ ಗ್ರಾಮ,
ಹಿರಿಯೂರು ತಾಲ್ಲೂಕು.

## ದೋಷಾರೋಪಣೆ

ನಾನು ಶ್ರೀಮತಿ. ಸುಜಾತ ಸುವರ್ಣ.ಬಿ, ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಹಿರಿಯೂರು, ಈ ಮೂಲಕ ನಿಮ್ಮನ್ನು ದೋಷಾರೋಪಣೆಗೆ ಗುರಿಪಡಿಸುವುದೇನೆಂದರೆ

ದಿನಾಂಕ 24.11.2018 ರಂದು ಸಂಜೆ 7.30 ರ ಸಮಯದಲ್ಲಿ ಹಿರಿಯೂರು ತಾಲ್ಲೂಕು ಸೀಗೆಹಟ್ಟಿ ಗ್ರಾಮದ ಬಳಿಯಿರುವ ಮದರ್ ಲ್ಯಾಂಡ್ ಢಾಭಾದಲ್ಲಿ ಆರೋಪಿಯಾದ ನೀವು ಊಟ ಮಾಡಿದ್ದು ಬಿಲ್ ನ್ನು ಕೇಳಿದ ಚಾಸಾ.1 ರವರಿಗೆ ಯಾವ ಹಣ ಕೊಡಬೇಕೋ ಸುಳೆಮಗನೆ, ಬೋಳಿಮಗನೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಗಲಾಟೆ ಮಾಡಿದ್ದು ಆ ಮೂಲಕ ಆರೋಪಿಯಾದ ನೀವು ಭಾ ದಂ ಸಂ ಕಲಂ 504 ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ.1 ರವರಿಗೆ ಕೈಕಾಲುಗಳಿಂದ ಹೊಡೆದು ನೋವುಂಟುಪಡಿಸಿದ್ದು ಆ ಮೂಲಕ ಆರೋಪಿಯಾದ ನೀವು ಭಾ ದಂ ಸಂ

ಕಲಂ 323 ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಚಾಸಾ.1 ರವರಿಗೆ ಅಲ್ಲಿಯೇ ಬಿದಿದ್ದ ಕೋಲಿನಿಂದ ಎಡಭಾಗದ ಕಿವಿಗೆ ಹೊಡೆದು ರಕ್ತಗಾಯಪಡಿಸಿ ನೋವುಂಟುಮಾಡಿದ್ದು ಆ ಮೂಲಕ ಆರೋಪಿಯಾದ ನೀವು ಭಾ ದಂ ಸಂ ಕಲಂ 324 ರ ಅಡಿಯಲ್ಲಿ ದಂಡಿಸಲ್ಪಡುವ ಅಪರಾಧ ಎಸಗಿದ್ದೀರೆಂದು ಆರೋಪಿಸಲಾಗಿದೆ.

(ಈ ಮೇಲೆ ಹೇಳಿದ ಆರೋಪಗಳು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುತ್ತಿದ್ದು ಈ ಆರೋಪಗಳಿಗಾಗಿ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಒಳಪಡತಕ್ಕದೆಂದು ಈ ಮೂಲಕ ನಾನು ನಿರ್ದೇಶಿಸುತ್ತೇನೆ .)

ದಿನಾಂಕಃ **28.06.2024**
ಸ್ಥಳಃ ಹಿರಿಯೂರು

(ಸುಜಾತ ಸುವರ್ಣ. ಬಿ)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ, ಹಿರಿಯೂರು